ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿನ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿನ ಕಛೇರಿಗಳ ಮತ್ತು ಗುತ್ತಿಗೆ ಘಟಕಗಳ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು ):-

934(1061) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಒಟ್ಟು ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ ಗುತ್ತಿಗೆ ಘಟಕಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ಇವುಗಳಿಂದ ಬರುವ ಆದಾಯವೆಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಇ) ಕೋಟ್ಯಾಂತರ ರೂಪಾಯಿ ಆದಾಯ ಸೋರಿಕೆಯನ್ನು ತಪ್ಪಿಸಲು ಮತ್ತು ಸುಗಮ ಕಾರ್ಯನಿರ್ವಹಣೆಗೆ ಇಲಾಖೆಯ ಹುದ್ದೆಗಳನ್ನು ಹೆಚ್ಚಿಸುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ ; ಹೌದಾದರೆ ಸರ್ಕಾರದ ಕ್ರಮವೇನು ; ಇಲ್ಲವಾದಲ್ಲಿ ಕಾರಣವೇನು?